ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	596 (712)
ಮಾನ್ಯ ಸದಸ್ಯರ ಹೆಸರು	:	ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	:	22-02-2022
ಉತ್ತರಿಸುವ ಸಚಿವರು	:	ಪೌರಾಡಳಿತ, ಸಣ್ಣ ಕೈಗಾರಿಕೆ, ಸಾರ್ವಜನಿಕ ವಲಯ ಉದ್ಯಮಗಳ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
(ಅ)	ಸ್ವಚ್ಛ ಭಾರತ ಯೋಜನೆಯ ಅಡಿಯಲ್ಲಿ 2018ನೇ ಸಾಲಿನಿಂದ 2021ನೇ ಸಾಲಿನವರೆಗೆ ರಾಜ್ಯಕ್ಕೆ ಕೇಂದ್ರದಿಂದ ಬಿಡುಗಡೆಯಾದ ಅನುದಾನದ ಮೊತ್ತವೆಷ್ಟು;	ಕೇಂದ್ರ ಪುರಸ್ಕೃತ ಸ್ವಚ್ಛ ಭಾರತ ಯೋಜನೆಯಡಿ 2018ನೇ ಸಾಲಿನಿಂದ 2021ನೇ ಸಾಲಿನವರೆಗೆ ಕರ್ನಾಟಕ ರಾಜ್ಯಕ್ಕೆ ರೂ 511.73 ಕೋಟಿಗಳ ಅನುದಾನ ಬಿಡುಗಡೆಯಾಗಿರುತ್ತದೆ.
(ಆ)	ಬಿಡುಗಡೆಯಾದ ಅನುದಾನವನ್ನು ಯಾವ ಯಾವ ಕಾರ್ಯಕ್ರಮಗಳಿಗೆ ಬಳಸಲಾಗಿದೆ;	ಸ್ವಚ್ಛ ಭಾರತ ಯೋಜನೆಯಡಿ ಬಿಡುಗಡೆಯಾದ ಅನುದಾನವನ್ನು ವೈಯಕ್ತಿಕ ಶೌಚಾಲಯಗಳ ನಿರ್ಮಾಣ, ಸಮುದಾಯ / ಸಾರ್ವಜನಿಕ ಶೌಚಾಲಯಗಳ ನಿರ್ಮಾಣ ಮತ್ತು ಘನತ್ಯಾಜ್ಯ ವಸ್ತು ನಿರ್ವಹಣೆಯ ಕಾಮಗಾರಿಗಳಿಗೆ ಬಳಕೆ ಮಾಡಲಾಗುತ್ತಿದೆ.
(ಇ)	ಸದರಿ ಕಾರ್ಯಕ್ರಮಗಳ ಅನುದಾನದ ಬಳಕೆಯಲ್ಲಿ ವಿಫಲರಾದ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು?	ಸ್ವಚ್ಛ ಭಾರತ ಯೋಜನೆಯಡಿ ರಾಜ್ಯವು ಶೇ.90 ರಷ್ಟು ಭೌತಿಕ ಪ್ರಗತಿ ಮತ್ತು ಶೇ.60 ರಷ್ಟು ಆರ್ಥಿಕ ಪ್ರಗತಿಯನ್ನು ಸಾಧಿಸಿರುತ್ತದೆ. ಪ್ರಗತಿ ಸಾಧಿಸಲು ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ ಮತ್ತು ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯರವರ ಅಧ್ಯಕ್ಷತೆಯಲ್ಲಿ ಮಾಹೆಯಾನ ಪ್ರಗತಿ ಪರಿಶೀಲನಾ ಸಭೆಗಳನ್ನು ಕೈಗೊಂಡು ಅನುದಾನವನ್ನು ಬಳಕೆ ಮಾಡಲು ಸೂಚಿಸಲಾಗುತ್ತಿದೆ. ಮುಂದುವರೆದು ಗುರಿ ಸಾಧಿಸದ ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳಿಗೆ ಕಾರಣ ಕೇಳಿ ನೋಟೀಸ್‌ಗಳನ್ನು ಸಹಾ ಜಾರಿಗೊಳಿಸಿ ಗುರಿ ಸಾಧಿಸುವಂತೆ ಕ್ರಮ ಕೈಗೊಳ್ಳಲಾಗಿದೆ.

ಸಂಖ್ಯೆ: ನಅಇ 49 ಸಿಎಸ್‌ಎಸ್ 2022

[ಎನ್. ನಾಗರಾಜ್ (ಎಂ.ಟಿ.ಬಿ.)]
ಪೌರಾಡಳಿತ, ಸಣ್ಣ ಕೈಗಾರಿಕೆ, ಸಾರ್ವಜನಿಕ ವಲಯ
ಉದ್ಯಮಗಳ ಸಚಿವರು.